6743

PR - 219
14/07/17

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅನುದಾನಿತ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿ ವೇತನವನ್ನು ಪಡೆಯುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ 8 ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವ ಬಗ್ಗೆ-

*****

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 153 ಎಸ್‌ಟಿಬಿ 1998, ದಿನಾಂಕ:02-12-1998.
2. ಸರ್ಕಾರದ ಆದೇಶ ಸಂಖ್ಯೆ: ಎಫ್ 12 ಎಸ್‌ಆರ್‌ಪಿ 2012(ಗಿಖಖ), ದಿನಾಂಕ:14-06-2015.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 53 ಇಎಸ್‌ಟಿ 4(ಬಿ) 2016, ದಿನಾಂಕ:11/08/2016.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ, ಸರ್ಕಾರದ ಆದೇಶದ ಸಂಖ್ಯೆ: ಎಫ್‌ಡಿ 03 ಎಸ್‌ಆರ್‌ಪಿ 96, ದಿನಾಂಕ:18/03/1996ರಲ್ಲಿ ಸರ್ಕಾರಿ ನೌಕರರಿಗೆ ಅನ್ವಯವಾಗುವ ಸ್ಥಗಿತ ವೇತನ ಬಡ್ತಿ ಮಂಜೂರಾತಿ ಸೌಲಭ್ಯವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ವಿಸ್ತರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ, ರಾಜ್ಯ ವೇತನ ಶ್ರೇಣಿಯಲ್ಲಿ ಗರಿಷ್ಠ ಹಂತವನ್ನು ತಲುಪಿ ಸ್ಥಗಿತಗೊಂಡಿರುವ ಸರ್ಕಾರಿ ನೌಕರರಿಗೆ ಪ್ರಸ್ತುತ ನೀಡುತ್ತಿರುವ 05 ಸ್ಥಗಿತ ವೇತನ ಬಡ್ತಿಗಳ ಮಂಜೂರಾತಿ ಸೌಲಭ್ಯವನ್ನು 08 ಸ್ಥಗಿತ ವೇತನ ಬಡ್ತಿಗಳಿಗೆ ದಿನಾಂಕ:01/04/2012 ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಸರ್ಕಾರಿ ನೌಕರರಿಗೆ ಹೆಚ್ಚಳ ಮಾಡಿರುವ 08 ಸ್ಥಗಿತ ವೇತನ ಬಡ್ತಿಗಳ ಮಂಜೂರಾತಿ ಸೌಲಭ್ಯವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಅನುದಾನಿತ ಪಾಲಿಟೆಕ್ನಿಕ್‌ಗಳು ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿ ವೇತನವನ್ನು ಪಡೆಯುತ್ತಿರುವ ಸಿಬ್ಬಂದಿಗಳಿಗೂ ಸಹ ವಿಸ್ತರಿಸಿ ಸೂಕ್ತ ಆದೇಶ ಹೊರಡಿಸುವಂತೆ ಪ್ರಸ್ತಾಪಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ರಾಜ್ಯ ಸರ್ಕಾರದ ನೌಕರರಿಗೆ ಈಗಿರುವ ಸ್ಥಗಿತ ವೇತನ ಬಡ್ತಿ ಮಂಜೂರಾತಿ ಸೌಲಭ್ಯವನ್ನು 05 ರಿಂದ 08 ಕ್ಕೆ ಹೆಚ್ಚಳ ಮಾಡಿರುವಂತೆ, ತಾಂತ್ರಿಕ ಶಿಕ್ಷಣ

ಪುಟ 2ಕ್ಕೆ

ಇಲಾಖೆಯಡಿ ಬರುವ ಅನುದಾನಿತ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿ ವೇತನವನ್ನು ಪಡೆಯುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೂ ಸಹ ಇದನ್ನು ವಿಸ್ತರಿಸುವುದು ಸಮಂಜಸವೆಂದು ಸರ್ಕಾರವು ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 123 ಟಿಪಿಇ 2016.**
**ಬೆಂಗಳೂರು, ದಿನಾಂಕ:12ನೇ ಜುಲೈ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ. ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿ ವೇತನವನ್ನು ಪಡೆಯುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ ಭವಿಷ್ಯವರ್ತಿಯಾಗಿ ಅನ್ವಯವಾಗುವಂತೆ ಸ್ಥಗಿತ ವೇತನ ಬಡ್ತಿಗಳ ಮಂಜೂರಾತಿಯ ಮಿತಿಗಳನ್ನು 05 ರಿಂದ 08 ಕ್ಕೆ ಹೆಚ್ಚಿಸಿ ಆದೇಶಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿಯ ಸಂಖ್ಯೆ:ಆಇ 151 ಸೇ-2/2017, ದಿನಾಂಕ:15/05/2017ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S Venkatesh

(ಎಸ್ ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ:

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಎಲ್ಲಾ ಅನುದಾನಿತ ಪಾಲಿಟೆಕ್ನಿಕ್ / ಇಂಜಿನಿಯರ್ ಕಾಲೇಜುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
3. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-2), ಆರ್ಥಿಕ ಇಲಾಖೆ
4. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ / ಒಡಿಜಿಸಿ

*********

**ಹಿಂಬರಹ ಸಂಖ್ಯೆ:** 53 ಇಎಸ್‌ಟಿ 4(ಬಿ) 2016 | 1121

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿದೇಶನಾಲಯ,
ಬೆಂಗಳೂರು -560001,
ದಿನಾಂಕ: 19.07.2017

ಸರ್ಕಾರದ ಆದೇಶ ಸಂ: ಇಡಿ 123 ಟಿಪಿಇ 2016, ದಿನಾಂಕ: 12.07.2017 ರ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಈ ಕೆಳಕಂಡವರಿಗೆ ರವಾನಿಸಲಾಗಿದೆ.

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

ಇವರಿಗೆ: ಎಲ್ಲಾ ಅನುದಾನಿತ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಚಾರ್ಯರಿಗೆ.
ಪ್ರತಿ: ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಜಿಆರ್‌ಟಿ (2) ಹಾಗೂ ಡಿವಿಪಿ ವಿಭಾಗಕ್ಕೆ.
✓ ಇ-ಆಡಳಿತ ವಿಭಾಗಕ್ಕೆ (ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು).